ESTD : No. JRB/Cell.II/69/Regn-4876/77-78 ✆:080-26601442
Date : 09-12-1977

# ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ

## THE BANGALORE CITY DIST. CO-OPERATIVE UNION LTD.,

' ಸಹಕಾರ ಭವನ ' ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018

E-mail: bcdcu1977@gmail.com

| ಜಿ. ಮಂಜುನಾಥ್ | ಕೃಷ್ಣಪ್ಪ ಕೆ.ಸಿ. | ಗೌತಮ್ ಹೆಚ್.ಎನ್. |
|---|---|---|
| ಅಧ್ಯಕ್ಷರು | ಉಪಾಧ್ಯಕ್ಷರು | ಖಜಾಂಚಿ |

ಗೆ, ದಿನಾಂಕ: 23.01.2025

ಸಂಪಾದಕರು,
ಸಹಕಾರ ವಾರಪತ್ರಿಕೆ,
ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು.

ಮಾನ್ಯರೇ,

ವಿಷಯ : ದಿನಾಂಕ: 21–01–2025 ರಂದು ಏರ್ಪಡಿಸಿದ ರಾಜ್ಯ ಮಟ್ಟದ ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವ ಬಗ್ಗೆ

****

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂದಿಸಿದಂತೆ ದಿನಾಂಕ: 21–01–2025 ರಂದು ಬೆಂಗಳೂರು ನಗರ ಜಿಲ್ಲೆಯಲ್ಲಿನ ಪತ್ತಿನ ಸಹಕಾರ ಸಂಘಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರಿಗೆ ಏರ್ಪಡಿಸಿದ್ದ ರಾಜ್ಯ ಮಟ್ಟದ ಕಾರ್ಯಕ್ರಮದ ಪೋಟೊ ಮತ್ತು ವರದಿಯನ್ನು ತಯಾರಿಸಿ ಈ ಪತ್ರದೊಂದಿಗೆ ಲಗತ್ತಿಸಿದ್ದು ಕಾರಣ ಸದರಿ ವರದಿಯನ್ನು ತಮ್ಮ ಸಹಕಾರ ವಾರಪತ್ರಿಕೆಯಲ್ಲಿ ಪ್ರಕಟಪಡಿಸಬೇಕೆಂದು ಈ ಮೂಲಕ ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇನೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ
ಸಹಿ/–
ಮುಖ್ಯಕಾರ್ಯನಿರ್ವಹಣಾಧಿಕಾರಿ

<u>**ಪ್ರಕಟಣೆಗಾಗಿ**</u>

ಬೆಂಗಳೂರು:– ಸಹಕಾರ ಸಂಘಗಳ ಅಸ್ತಿತ್ವ ಇವತ್ತು ವಿಶ್ವಾಸದ ಮೇಲೆ ನಿಂತಿದೆ. ಸಹಕಾರಿಗಳು ಒಟ್ಟಾಗಿ ಕೆಲಸ ಮಾಡಿದರೆ ಮಾತ್ರ ಸಹಕಾರ ಕ್ಷೇತ್ರದ ಉಳಿವು ಸಾಧ್ಯ. ಸಹಕಾರ ಸಂಘಗಳು ಉಳಿದರೆ ಮಾತ್ರ ಬಡವರು, ರೈತರು, ಮಹಿಳೆಯರು ಸಮಾಜದಲ್ಲಿ ಆರ್ಥಿಕವಾಗಿ ಶಕ್ತರಾಗಲು ಸಾಧ್ಯ. ಯಾವುದೇ ಸಂಘದಲ್ಲಿ ಆಡಳಿತ ಮಂಡಳಿ ದಾರಿ ತಪ್ಪಿದರೆ ಆ ಸಂಘದ ವಿನಾಶ ಆದಂತೆ. ಇವತ್ತಿನ ದಿನಗಳಲ್ಲಿ ಸಾಮಾನ್ಯ ಜನರು ರಾಷ್ಟ್ರೀಕೃತ ಬ್ಯಾಂಕಿಗೆ ಹೋಗಿ ಸಾಲ ಪಡೆಯುವುದು ಅಸಾಧ್ಯ. ಸಹಕಾರ ಸಂಘಗಳು ರಾಷ್ಟ್ರೀಕೃತ ಬ್ಯಾಂಕಿಗೆ ಸಮನಾಗಿ ಕೆಲಸ ಮಾಡುತ್ತಿವೆ ಎಂದು ಮಾನ್ಯ ಶಾಸಕರಾದ ಶ್ರೀ ಕೆ. ಗೋಪಾಲಯ್ಯರವರು ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ಬೆಂಗಳೂರು ಹಾಗೂ ಬೆಂಗಳೂರು ನಗರ ಜಿಲ್ಲೆಯ ಪತ್ತಿನ ಸಹಕಾರ ಸಂಘಗಳ ಮುಖ್ಯಕಾರ್ಯನಿರ್ವಹನರು ಮತ್ತು ಸಿಬ್ಬಂದಿಗಳಿಗೆ ಶ್ರೀ ಬೈರವಗಿರಿ ಕನ್ವೆನ್‌ವನ್ ಹಾಲ್ ನಂ.6/7, ಕೆಂಪೇಗೌಡನಗರ, (ವಿಶಾಲ ಮಾರ್ಟ್ ಪಕ್ಕ), ಸರ್ವಿಸ್ ರಸ್ತೆ ಲಗ್ಗೆರೆ ರಿಂಗ್ ರೋಡ್, ಬೆಂಗಳೂರು ದಿನಾಂಕ: 21–01–2025 ರಂದು ಏರ್ಪಡಿಸಿದ್ದ ರಾಜ್ಯ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಶ್ರೀ ಎ.ಸಿ. ನಾಗರಾಜ್ ರವರು ಮಾತನಾಡುತ್ತಾ, ಭಾರತವು ಕೃಷಿ ಪ್ರಧಾನ ದೇಶವಾಗಿದೆ. ಸಹಕಾರ ಕ್ಷೇತ್ರ ಎಲ್ಲಾ ಕ್ಷೇತ್ರದಲ್ಲೂ ತನ್ನ ಪ್ರಾಬಲ್ಯವನ್ನು ಮೆರೆದಿದೆ. ಪೂರಕವಾಗಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಮಾತೃ ಸಂಸ್ಥೆಯಾಗಿ ವಿವಿಧ ಶಿಕ್ಷಣ ತರಬೇತಿಗಳನ್ನು ನೀಡುವುದರ ಮೂಲಕ ಸಹಕಾರ ಸಂಘಗಳು ಉತ್ತಮವಾಗಿ ಬೆಳೆದು ಜನಸಾಮಾನ್ಯರು ತಮ್ಮ ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಲು ಬಹಳಷ್ಟು ಸಹಕಾರಿಯಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರು ಶ್ರೀ ಕೆ.ಎಸ್ ನವೀನ್ ರವರು ಮಾತನಾಡಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ರಾಜ್ಯ ಸಹಕಾರ ಸಂಘಗಳ ಮಾತೃ ಸಂಸ್ಥೆಯಾಗಿದೆ. ಮಹಾಮಂಡಳವು ರಾಜ್ಯದ 30 ಜಿಲ್ಲಾ ಸಹಕಾರ ಯೂನಿಯನ್‌ಗಳ ಮೂಲಕ ಸಹಕಾರ ಶಿಕ್ಷಣ, ತರಬೇತಿ ಹಾಗೂ ಪ್ರಚಾರದ ಕೆಲಸಗಳನ್ನು ಪರಿಣಾಮಕಾರಿಯಾಗಿ ನಡೆಸಿಕೊಂಡು ಬರುತ್ತಿದೆ. ಮಹಾಮಂಡಳ 50 ವರ್ಷಗಳಿಂದ ನಿರಂತರವಾಗಿ ದೇಶದಲ್ಲಿ ಏಕೈಕ ಸಹಕಾರ ವಾರಪತ್ರಿಕೆಯನ್ನು ಪ್ರಕಟಿಸುತ್ತಿದೆ. ಮಹಾಮಂಡಳ ರಾಜ್ಯದ ಸಹಕಾರ ಚಳುವಳಿಯ ಪ್ರಗತಿಗೆ ತನ್ನದೇ ಆದ ವಿಶೇಷ ಕೊಡುಗೆ ನೀಡುತ್ತಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಜೆ. ಮಂಜುನಾಥ್ ಮಾತನಾಡುತ್ತಾ, ಬೆಂಗಳೂರು ನಗರ ಜಿಲ್ಲೆಯಲ್ಲಿ ಪತ್ತಿನ ಸಹಕಾರ ಸಂಘಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ರಾಷ್ಟ್ರೀಕೃತ ಬ್ಯಾಂಕುಗಳು ಜೊತೆ ಪೈಪೋಟಿ ಮಾಡಿ ಠೇವಣಿ ಸಂಗ್ರಹಣೆ, ಸಾಲ ನೀಡುವ ಹಾಗೂ ವಸೂಲಾತಿಯಲ್ಲಿ ಅಸ್ತಿತ್ವವನ್ನು ಉಳಿಸಿಕೊಳ್ಳುವುದು ಕಷ್ಟ ಸಾಧ್ಯವಾಗಿದೆ. ಜನಸಾಮಾನ್ಯರಿಗೆ ನಮ್ಮ ಪತ್ತಿನ ಸಹಕಾರ ಸಂಘಗಳು ಬಹಳ ಹತ್ತಿರವಾಗಿದ್ದು, ಆಪ್ತವಾಗಿ ಜನರ ಜೀವನದೊಂದಿಗೆ ಬೆರೆತುಹೋಗಿದೆ. ಜನರು ಒಂದಲ್ಲ ಒಂದು ರೀತಿಯಲ್ಲಿ ಸಹಕಾರ ಸಂಘಗಳಿಂದ ಅನುಕೂಲ ಪಡೆದುಕೊಳ್ಳುತ್ತಿದ್ದಾರೆ. ಸಾಲ ಪಡೆಯುವಲ್ಲಿ, ನಿವೇಶನ ಪಡೆಯುವಲ್ಲಿ, ಪಡೆದ ನಿವೇಶನದಲ್ಲಿ ಮನೆ ಕಟ್ಟಲು ಸಾಲ ಹೀಗೆ ಹತ್ತು ಹಲವಾರು ವಿಷಯಗಳಲ್ಲಿ ಸಹಕಾರ ಸಂಘಗಳ ಜೊತೆ ಉತ್ತಮ ಬಾಂಧವ್ಯ ಹೊಂದಿರುತ್ತಾರೆ ಎಂದು ಹೇಳಿದರು.

..........2

ಕಾರ್ಯಕ್ರಮದಲ್ಲಿ ಶ್ರೀ ಹೆಚ್.ಎಸ್. ನಾಗರಾಜಯ್ಯ, ನಿವೃತ್ತ ಸಹಕಾರ ಸಂಘಗಳ ಅಪರ ನಿಬಂಧಕರು, ಇವರು " ಪತ್ತಿನ ಸಹಕಾರ ಸಂಘಗಳಲ್ಲಿ ಸಾಲ ವಸೂಲಾತಿ ಹಾಗೂ ಕಾನೂನು ಕ್ರಮಗಳು, ಋಣಾತ್ಮಕ ಸಾಲ " ವಿಷಯ ಕುರಿತು ಉಪನ್ಯಾಸ ನೀಡಿದರು. ನಂತರ ಶ್ರೀ ಸ್ಟಾರ್ ವೆಂಕಟೇಶ್, ರಾಜ್ಯ ತರಬೇತಿದಾರರು ಬೆಂಗಳೂರು ಇವರು " ಒತ್ತಡ ನಿರ್ವಹಣೆ ಮತ್ತು ಸಂವಹನ " ಕುರಿತು ಉಪನ್ಯಾಸ ನೀಡಿದರು. ನಂತರ ಶ್ರೀ ಅನಿಲ್ ಭಾರದ್ವಾಜ್, ಚಾರ್ಟಡ್ ಅಕೌಂಟೆಂಡ್ ಬೆಂಗಳೂರು, " ಸರಕು ಸೇವಾ ತೆರಿಗೆ (ಜಿ.ಎಸ್.ಟಿ) ಮತ್ತು ಆದಾಯ ತೆರಿಗೆ " ವಿಷಯ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ಉಪಾಧ್ಯಕ್ಷರಾದ ಶ್ರೀ ಕೃಷ್ಣಪ್ಪ ಕೆ.ಸಿ, ನಿರ್ದೇಶಕರಾದ ಶ್ರೀ ಶ್ರೀನಿವಾಸ ಗೌಡ ವೈ ರವರು ಉಪಸ್ಥಿತರಿದ್ದರು. ಒಕ್ಕೂಟದ ನಿರ್ದೇಶಕರಾದ ಶ್ರೀ ಕೆ.ಎಸ್. ಚಾಮರಾಜು ರವರು ಎಲ್ಲರನ್ನು ಸ್ವಾಗತಿಸಿದರು. ಕೊನೆಯಲ್ಲಿ ಒಕ್ಕೂಟದ ನಿರ್ದೇಶಕರಾದ ಶ್ರೀ ಹೆಚ್.ಟಿ. ನಾಗೇಶ್‌ರವರು ವಂದನಾರ್ಪಣೆ ಮಾಡಿದರು.

ಸಹಿ/–
ಮುಖ್ಯಕಾರ್ಯನಿರ್ವಹಣಾಧಿಕಾರಿ

